ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳಿಗೆ ಜಲ್ಲಿ ಮರಳು ದೊರೆಯದಿರುವ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

1513 (1827) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಅಭಿವೃದ್ಧಿ ಕೆಲಸಗಳಿಗೆ ಹಾಗೂ ಬಡವರು ನಿರ್ಮಿಸಿರುವ ಮನೆಗಳ ನಿರ್ಮಾಣಕ್ಕೆ ಜಲ್ಲಿ, ಮರಳು ಕಲ್ಲು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಮರಳು ಬದಲಾಗಿ ಎಂ ಸ್ಯಾಂಡ್ ಉಪಯೋಗಿಸಲು ಸರ್ಕಾರದಿಂದ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಹಾಗಿದ್ದಲ್ಲಿ, ಯಾವ ರೀತಿ ಕ್ರಮ ಕೈಗೊಳ್ಳಲಾಗಿದೆ ?